ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮಂಡ್ಯ ಜಿಲ್ಲೆ, ಮಂಡ್ಯ.

ಸಂಖ್ಯೆ: ಸಿಬ್ಬಂದಿ (1) 91/2019-20 ದಿನಾಂಕ: 03-06-2020.

## ಅಧಿಕೃತ ಜ್ಞಾಪನ

ವಿಷಯ:- 2019-20 ನೇ ಸಾಲಿನಲ್ಲಿ ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:- ಈ ಕಛೇರಿಯ ಸಮಸಂಖ್ಯೆ ಅಧಿಕೃತ ಜ್ಞಾಪನದ ದಿನಾಂಕ: 12-03-2020 ಹಾಗೂ 17-04-2020.

*************

ಉಲ್ಲೇಖಿತ ಅಧಿಕೃತ ಜ್ಞಾಪನದಲ್ಲಿ 2019-20 ನೇ ಸಾಲಿನಲ್ಲಿ ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ 54 ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ದಿನಾಂಕ: 12-03-2020 ರಲ್ಲಿ ಅಧಿಸೂಚನೆಯನ್ನು ಹೊರಡಿಸಿದ್ದು, ಕೋವಿಡ್-19 ರ ಸೋಂಕು ಹಿನ್ನೆಲೆಯಲ್ಲಿ ರಾಜ್ಯಾದ್ಯಾಂತ ಲಾಕ್‌ಡೌನ್ ಜಾರಿಯಲ್ಲಿದ್ದದರಿಂದ ಅರ್ಜಿ ಸಲ್ಲಿಸಲು ದಿನಾಂಕ: 01-06-2020 ರವರೆಗೆ ಹಾಗೂ ಶುಲ್ಕ ಪಾವತಿಗೆ ದಿನಾಂಕ: 06-06-2020 ರವರೆಗೆ ವಿಸ್ತರಿಸಿ ನಿಗದಿಪಡಿಸಲಾಗಿತ್ತು.

ಪ್ರಸ್ತುತ ಶುಲ್ಕ ಪಾವತಿಗೆ ತಾಂತ್ರಿಕ ಕಾರಣಗಳಿಂದಾಗಿ ಅಡಚಣೆಯಾಗುತ್ತಿದ್ದು, ಅಭ್ಯರ್ಥಿಗಳಿಂದ ದೂರುಗಳು ಕೇಳಿಬಂದಿರುವ ಕಾರಣದಿಂದಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಗೆ ಕೊನೆಯ ದಿನಾಂಕವಾಗಿದ್ದ 01-06-2020 ನ್ನು ಮುಂದುವರೆಸಿ ದಿನಾಂಕ: 20-06-2020 ರವರೆಗೆ ಹಾಗೂ ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 06-06-2020 ನ್ನು ದಿನಾಂಕ: 25-06-2020 ರವರೆಗೆ ವಿಸ್ತರಿಸಿ ಆದೇಶಿಸಿದೆ.

3/6/20.

ಅಧ್ಯಕ್ಷರು,
ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ.

ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ/ಕಳುಹಿಸಿದೆ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುದಾರಣೆ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

-2-